ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/22/ಇಎಸ್‌ಟಿ(1)/2024

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 30.09.2024

**ಸುತ್ತೋಲೆ**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗೆ ತಾತ್ಕಾಲಿಕವಾಗಿ ಪ್ರಭಾರ ವಹಿಸುವ ಕುರಿತು.

***

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಖಾಲಿ ಇರುವ ಖಾಯಂ ಪ್ರಾಂಶುಪಾಲರ ಹುದ್ದೆಯ ಪ್ರಭಾರೆಯನ್ನು ನಿಯಮಾನುಸಾರ ಸಂಸ್ಥೆಯ ಸೇವಾ ಜೇಷ್ಠತೆಯಲ್ಲಿ ಹಿರಿಯ ಬೋಧಕ ಸಿಬ್ಬಂದಿಗಳು ವಹಿಸಿಕೊಳ್ಳತಕ್ಕದ್ದು, ಒಂದು ವೇಳೆ ಪ್ರಭಾರೆ ನಿರಾಕರಿಸಿದಲ್ಲಿ ಸೂಕ್ತ ದಾಖಲೆಗಳೊಂದಿಗೆ ಲಿಖಿತ ಸಮಜಾಯಿಷಿ ನೀಡತಕ್ಕದ್ದು ಇಲ್ಲವಾದಲ್ಲಿ ಅಂತಹ ಸಿಬ್ಬಂದಿಯವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದು ಎಂದು ಈಗಾಗಲೇ ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ: ಡಿಟಿಇ 10 ಇಎಸ್‌ಟಿ(1) 2021, ದಿನಾಂಕ: 06.12.2021ರಲ್ಲಿ ಸೂಚಿಸಲಾಗಿತ್ತು, ಆದರೂ ಕೂಡ ಸದರಿ ಇಲಾಖಾ ಸುತ್ತೋಲೆಯನ್ನು ಪಾಲಿಸದೇ ಕಿರಿಯರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸುತ್ತಿರುವುದರಿಂದ ಕಾಲೇಜಿನಲ್ಲಿ ಆಡಳಿತಾತ್ಮಕ ಗೊಂದಲಗಳು ಉಂಟಾಗುತ್ತಿರುವುದನ್ನು ಗಮನಿಸಲಾಗಿದೆ.

ಆದುದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಖಾಯಂ ಪ್ರಾಂಶುಪಾಲರು / ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ನಿವೃತ್ತಿ, ವರ್ಗಾವಣೆ, ಇತ್ಯಾದಿ ಸಂದರ್ಭದಲ್ಲಿ ಪ್ರಾಂಶುಪಾಲರ ಪ್ರಭಾರದಿಂದ ಬಿಡುಗಡೆ ಹೊಂದುವಾಗ ಪ್ರಾಂಶುಪಾಲರ ಪ್ರಭಾರವನ್ನು ಸಂಸ್ಥೆಯ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಬೋಧಕ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ವಹಿಸಲು ಸೂಚಿಸಿದೆ. ಒಂದು ವೇಳೆ ಸದರಿಯವರು ಪ್ರಾಂಶುಪಾಲರ ಪ್ರಭಾರ ವಹಿಸಿಕೊಳ್ಳಲು ನಿರಾಕರಿಸಿದಲ್ಲಿ, ಅವರಿಂದ ಲಿಖಿತವಾಗಿ ಮನವಿ ಪಡೆದು ಸದರಿಯವರ ನಂತರದ ಸೇವಾ ಜೇಷ್ಠತೆಯನ್ನು ಹೊಂದಿರುವ ಹಿರಿಯ ಬೋಧಕ ಸಿಬ್ಬಂದಿಗಳಿಗೆ ಪ್ರಾಂಶುಪಾಲರ ಕಾರ್ಯಭಾರವನ್ನು ತಾತ್ಕಲಿಕವಾಗಿ ವಹಿಸಿಕೊಡಲು ಸೂಚಿಸಿದೆ.

ಮುಂದುವರೆದು ಪ್ರಸ್ತುತ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಹಿರಿಯ ಬೋಧಕ ಸಿಬ್ಬಂದಿಗಳಿದ್ದರು ಸಹ ಕಿರಿಯ ಬೋಧಕ ಸಿಬ್ಬಂದಿಯು ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ ಕೂಡಲೇ ಹಿರಿಯ ಬೋಧಕ ಸಿಬ್ಬಂದಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸಲು ಸೂಚಿಸಿದೆ.

**ಆಯುಕ್ತರು**
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ,**

1. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್, ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ (ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ).
2. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

Scanned with OKEN Scanner